# ಕರ್ನಾಟಕ ವಿಧಾನ ಪರಿಷತ್ತು
## ನೂರ ಮೂವತ್ತನೆಯ ಅಧಿವೇಶನ
## (ಮುಂದುವರೆದ ಉಪವೇಶನಗಳು)
## <u>ಕಾರ್ಯಕಲಾಪಗಳ ಪಟ್ಟಿ</u>
## ಗುರುವಾರ, ದಿನಾಂಕ: 14ನೇ ಜುಲೈ, 2016
## (ಸಮಯ: ಬೆಳಗ್ಗೆ: 11.00 ಗಂಟೆಗೆ)

******

### 01. ನಿಯಮ 68ರಡಿಯಲ್ಲಿ ಸಾರ್ವಜನಿಕ ಮಹತ್ವದ ಜರೂರು ವಿಷಯದ ಮೇಲಿನ ಚರ್ಚೆಗೆ ಸರ್ಕಾರದಿಂದ ಉತ್ತರ

**ಶ್ರೀಯುತರುಗಳಾದ: ಕೆ.ಎಸ್. ಈಶ್ವರಪ್ಪ, ಮಾನ್ಯ ವಿರೋಧ ಪಕ್ಷದ ನಾಯಕರು, ಕ್ಯಾಪ್ಟನ್ ಗಣೇಶ್ ಕಾರ್ಣಿಕ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಮಾನ್ಯ ಸದಸ್ಯರುಗಳಾದ: ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ, ಬಸವರಾಜ ಹೊರಟ್ಟಿ, ಟಿ.ಎ. ಶರವಣ ಹಾಗೂ ಇತರರುಗಳು** ರಾಜ್ಯದಲ್ಲಿ ಆಡಳಿತ ವ್ಯವಸ್ಥೆ ಮತ್ತು ಪೋಲೀಸ್ ವ್ಯವಸ್ಥೆ ಕುಸಿದಿದ್ದು, ಪ್ರಾಮಾಣಿಕ ಅಧಿಕಾರಿಗಳಿಗೆ ರಕ್ಷಣೆ ಇಲ್ಲದೆ ಆತ್ಮಹತ್ಯೆ ಮಾಡಿಕೊಳ್ಳುತ್ತಿರುವ ಹಾಗೂ ಸ್ವಯಂ ನಿವೃತ್ತಿಯಾಗುತ್ತಿರುವ ಪರಿಸ್ಥಿತಿ ಬಗ್ಗೆ ನಡೆದ ಚರ್ಚೆಯ ಮೇಲೆ ಸರ್ಕಾರದಿಂದ ಉತ್ತರ.

### 02. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತನೆಯ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತನೆಯ ಪಟ್ಟಿ

### 03. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಅ) ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಒಂದನೇ ಹಾಗೂ ಎರಡನೇ ಪಟ್ಟಿಗಳ ರೀತ್ಯಾ.

**ಕಾರ್ಯದರ್ಶಿಯವರು:-**

ಆ) (i) ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2016ನೇ ಸಾಲಿನ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ವಿಧೇಯಕ
(ii) ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2016ನೇ ಸಾಲಿನ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕ ಹಾಗೂ
(iii) ವಿಧಾನ ಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2016ನೇ ಸಾಲಿನ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದಿಡುವುದು.

..2

## 04. ವರದಿಗಳನ್ನೊಪ್ಪಿಸುವುದು

**ಅ) ಶ್ರೀ ಎಸ್.ವ್ಹಿ. ಸಂಕನೂರ, (ಸದಸ್ಯರು, ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ)** ಅವರು 2015-16ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಮೂವತ್ತೊಂದನೆಯ ವರದಿಯನ್ನು ಒಪ್ಪಿಸುವುದು.

**ಆ) ಶ್ರೀ ಆರ್. ಧರ್ಮಸೇನಾ, (ಸದಸ್ಯರು, ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ)** ಅವರು ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 2015-16ನೇ ಸಾಲಿನ 14ನೇ ವಿಧಾನ ಸಭೆಯ ನಾಲ್ಕನೇ ವರದಿಯನ್ನು ಒಪ್ಪಿಸುವುದು.

## 05. ಶಾಸನ ರಚನೆ

### ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

**01. ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ವಿಧೇಯಕ, 2016**

**ಶ್ರೀ ಎಚ್.ಕೆ. ಪಾಟೀಲ್** (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2016ನೇ ಸಾಲಿನ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**02. ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕ, 2016**

**ಶ್ರೀ ಹೆಚ್.ಎಸ್. ಮಹದೇವ ಪ್ರಸಾದ್** (ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2016ನೇ ಸಾಲಿನ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**03. ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2016**

**ಶ್ರೀ ಟಿ.ಬಿ. ಜಯಚಂದ್ರ** (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಸಣ್ಣ ನೀರಾವರಿ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ 2016ನೇ ಸಾಲಿನ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು

..3

## 06. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ಉಡುಪಿ ಮತ್ತು ಕುಂದಾಪುರ ತಾಲ್ಲೂಕುಗಳಿಗೆ ಶಾಶ್ವತ ಕುಡಿಯುವ ನೀರನ್ನು ಒದಗಿಸಲು ವರಾಹಿ ನೀರಾವರಿ ಯೋಜನೆಯ ಕಾಲುವೆಯನ್ನು ಉಡುಪಿ ತಾಲ್ಲೂಕಿನ ಹೆಜಮಾಡಿಯವರೆಗೂ ಮುಂದುವರೆಸಿ, ಕೆರೆಗಳನ್ನು ತುಂಬಿಸುವ ಯೋಜನೆ ಬಗ್ಗೆ **ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ** ಗಮನ ಸೆಳೆಯುವುದು.

**ಆ) ಶ್ರೀ ಐವನ್ ಡಿ'ಸೋಜಾ (ಸರ್ಕಾರಿ ಮುಖ್ಯ ಸಚೇತಕರು)** ಅವರು ಅಂತರ್ಜಲ ಕುಸಿತದಿಂದಾಗಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನೀರಿನ ಅಭಾವ ಉಂಟಾಗಿರುವುದರಿಂದ ಅಂತರ್ಜಲ ವೃದ್ಧಿಸಲು ಇಲಾಖೆಯ ಮುಂದಿರುವ ಯೋಜನೆಗಳ ಬಗ್ಗೆ **ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರ** ಗಮನ ಸೆಳೆಯುವುದು.

## 07. ನಿಯಮ 330ರ ಮೇರೆಗೆ

**ಅ) ಶ್ರೀ ರಾಮಚಂದ್ರಗೌಡ** ಅವರು ಬೆಂಗಳೂರು ನಗರದ ಕೆಲವು ಕೆರೆಗಳಲ್ಲಿ ವಿಷಯುಕ್ತ ಹಾಗೂ ಹಾನಿಕಾರಕವಾದ ನೊರೆ ಸಮಸ್ಯೆಯಿಂದಾಗಿ ಲಕ್ಷಾಂತರ ಮೀನುಗಳು ಸಾವನ್ನಪ್ಪಿದ್ದು ಹಾಗೂ ಕೆರೆಗಳ ಸುತ್ತಮುತ್ತಲಿನ ಸಾರ್ವಜನಿಕರ ಆರೋಗ್ಯಕ್ಕೆ ದುಷ್ಪರಿಣಾಮವುಂಟಾಗುತ್ತಿರುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು)**

**ಆ) ಶ್ರೀ ಪುಟ್ಟಣ್ಣ** ಅವರು ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ 1993-94 ಮತ್ತು 1994-95ರಲ್ಲಿ ಸೇವೆ ಸಲ್ಲಿಸಿ, ಶೇ 55% ಕ್ಕಿಂತ ಕಡಿಮೆ ಅಂಕ ಪಡೆದ ಅರೆಕಾಲಿಕ ಉಪನ್ಯಾಸಕರಗಳ ಸೇವಾ ಸಕ್ರಮಾತಿ ಮಾಡುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)**

## 08. ಅರ್ಧ ಗಂಟೆ ಕಾಲಾವಧಿ ಚರ್ಚೆ

ಅ) ಸಮಾಜ ಕಲ್ಯಾಣ ಇಲಾಖೆಯಿಂದ ಹಮ್ಮಿಕೊಳ್ಳಲಾದ ಕಾರ್ಯಕ್ರಮಗಳ ಬಗ್ಗೆ ದಿನಾಂಕ: 04.07.2016ರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 183(1521)ಕ್ಕೆ ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀಮತಿ ಮೋಟಮ್ಮ** ಅವರಿಂದ ಅರ್ಧಗಂಟೆ ಕಾಲಾವಧಿ ಚರ್ಚೆ.

ಆ) ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಪರಿಸ್ಥಿತಿ ಕುರಿತು ದಿನಾಂಕ: 24.03.2016ರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 710(914)ಕ್ಕೆ ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀಮತಿ ತಾರಾಅನೂರಾಧ** ಅವರಿಂದ ಅರ್ಧಗಂಟೆ ಕಾಲಾವಧಿ ಚರ್ಚೆ.

**ಶ್ರೀನಿವಾಸ**
**ಕಾರ್ಯದರ್ಶಿ(ಪ್ರ)**

---